ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು,ಸೆ.2: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನೆಯಡಿ ವಿವಿಧ ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 56 ಅಂಗನವಾಡಿ ಕಾರ್ಯಕರ್ತೆ ಹಾಗೂ 221 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗೆ ಆನ್‌ಲೈನ್‌ನಲ್ಲಿ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಮೊದಲ ಹಂತದಲ್ಲಿ ಆನ್‌ಲೈನ್ ಅರ್ಜಿ ನಮೂನೆಯಲ್ಲಿ ಮಾಹಿತಿ ಭರ್ತಿ ಮಾಡಬೇಕು. 2ನೇ ಹಂತದಲ್ಲಿ ಸಿಂ ಹಾಗೂ ಭಾವಚಿತ್ರವನ್ನು ಅಪ್‌ಲೋಡ್ ಮಾಡಬೇಕು. ನಂತರ ಇ-ಸೈನ್ ಹಂತವನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು. 3ನೇ ಹಂತದಲ್ಲಿ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕು. ಅರ್ಜಿ ಸಲ್ಲಿಸಲು ಅಕ್ಟೋಬರ್ 10 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ಬೆಳ್ತಂಗಡಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ದೂ. ಸಂ.:08256-295134, ಬಂಟ್ವಾಳ: 08255- 298562, ಮಂಗಳೂರು (ಗ್ರಾ): 0824-2263199, ಮಂಗಳೂರು (ನ):0824-2959809, ಪುತ್ತೂರು: 08251-298788, ಸುಳ್ಯ: 7795581349, ವಿಟ್ಲ: 08255-238080ನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.